ಕಡಿಮೆಯಾಗಿದೆ. ಆದುದರಿಂದ ಬೆಂಗಳೂರಿನಲ್ಲಿ ಜಾರಿಯಲ್ಲಿರುವ ಪದ್ಧತಿಯನ್ನು ಉಳಿದ ಪ್ರಾದೇಶಗಳಿಗೂ ವಿಸ್ತರಿಸುವುದು ಕಷ್ಟ ಸಾಧ್ಯ.

ಆ. ಉದ್ಭವಿಸುವುದಿಲ್ಲ.

ಇ. ಗ್ರಾಮಾಂತರ ಪ್ರದೇಶದಲ್ಲಿ ಪಟ್ಟಣ ಪ್ರದೇಶಗಳಿಗಿಂತ ಹೆಚ್ಚು ಪಡಿತರ ಚೀಟಿಗಳಿದ್ದು ಹಾಗೂ ಕೇಂದ್ರ ಸರ್ಕಾರದಿಂದ ಬಿಡುಗಡೆಯಾಗುತ್ತಿರುವ ಆನುದಾನವು ರಾಜ್ಯದ ಬೇಡಿಕೆಗೆ ಕಡಿಮೆ ಇರುವುದರಿಂದ ಗ್ರಾಮೀಣ ಪ್ರದೇಶದ ಪಡಿತರ ಚೀಟಿದಾರರಿಗೆ ಕುಟುಂಬದ ಜನಸಂಖ್ಯೆ ಆಧಾರದ ಮೇಲೆ ಪಡಿತರಗಳನ್ನು ವಿತರಿಸಲು ಸಾಧ್ಯವಾಗುತ್ತಿಲ್ಲ.

ಕರ್ನಾಟಕ ಪ್ರವಾಸೋದ್ಯಮಕ್ಕೆ ಜಪಾನ್ ದೇಶದ ಹಣ.

560 (958): ಶ್ರೀ ಬಿ.ಹೆಚ್. ಲಕ್ಷ್ಮಣಯ್ಯ (ಬೇಲೂರು)

ಪ್ರವಾಸೋದ್ಯಮ ಮತ್ತು ಸಾರ್ವಜನಿಕ ಕುಂದುಕೊರತೆಗಳ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ. ಜಪಾನ್ ದೇಶದವರು ಕರ್ನಾಟಕ ಪ್ರವಾಸೋದ್ಯಮಕ್ಕೆ 100 ಕೋಟಿ ರೂ. ಕೊಡಲಿದ್ದಾರೆಂದು ಎರಡು ವರ್ಷದ ಕೆಳಗೆ ಸರ್ಕಾರ ಪ್ರಕಟಿಸಿದ್ದುದು ನಿಜವೆ ?

ಆ. ಹಾಗಿದ್ದಲ್ಲಿ, ಎರಡು ವರ್ಷಗಳು ಕಳೆದರೂ ಹಣ ಬಾರದಿರಲು ಕಾರಣವೇನು ?

ಶ್ರೀ ಪೆರಿಕಲ್ ಎಂ. ಮಲ್ಲಪ್ಪ (ಪ್ರವಾಸೋದ್ಯಮ ಮತ್ತು ಸಾರ್ವಜನಿಕ ಕುಂದು ಕೊರತೆಗಳ ರಾಜ್ಯ ಸಚಿವರು):–

ಅ. ಹೌದು.

ಆ. ಜಪಾನಿನ ಓ.ಇ.ಸಿ.ಎಫ್. ಸಂಸ್ಥೆಯು ಕರ್ನಾಟಕ ಪ್ರವಾಸೋದ್ಯಮ ಅಭಿವೃದ್ಧಿ ಯೋಜನೆಯನ್ನು ಆಯ್ಕೆ ಮಾಡಿಲ್ಲ.

ಕನ್ನಡ ಪ್ರಾಧಿಕಾರದ ಕರ್ತವ್ಯಗಳು

562 (1357): ಶ್ರೀ ಕೆ. ಹರ್ಷಕುಮಾರ ಗೌಡ (ಚಾಮರಾಜ)

ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ. ಸರ್ಕಾರ ನೇಮಿಸಿರುವ ಕನ್ನಡ ಪ್ರಾಧಿಕಾರದ ಸದಸ್ಯರುಗಳಾರು ?

ಆ. ಪ್ರಾಧಿಕಾರಕ್ಕೆ ಸರ್ಕಾರದಿಂದ ಬಿಡುಗಡೆ ಮಾಡಿರುವ ಹಣವೆಷ್ಟು ?

ಇ. ಕನ್ನಡ ಪ್ರಾಧಿಕಾರದ ಜವಾಬ್ದಾರಿ ಮತ್ತು ಕರ್ತವ್ಯಗಳೇನು ?

ಶ್ರೀ ಎಂ. ವೀರಪ್ಪ ಮೊಯಿಲಿ (ಮುಖ್ಯಮಂತ್ರಿಗಳು):–

ಅ. ಅನುಬಂಧ–1ರಲ್ಲಿ ಕೊಟ್ಟಿದೆ.

ಆ. 1992–93ನೇ ಸಾಲಿಗೆ ರೂ. 11.13 ಲಕ್ಷ ಬಿಡುಗಡೆ ಮಾಡಿದೆ. 1993–94ನೇ ಸಾಲಿಗೆ ಅಯವ್ಯಯದಲ್ಲಿ ರೂ. 16.50 ಲಕ್ಷ ಗೊತ್ತುಪಡಿಸಿದೆ.

ಇ. 1. ಆಡಳಿತದಲ್ಲಿ ಕನ್ನಡ ಅನುಷ್ಠಾನ

2. ಸರ್ಕಾರ ಒಪ್ಪಿರುವ ಡಾ. ಸರೋಜಿನಿ ಮಹಿಷಿ ವರದಿ ಶಿಫಾರಸುಗಳನ್ನು ಕಾರ್ಯಗತಗೊಳಿಸಲು ಕಾರ್ಯವಿಧಾನ ರೂಪಿಸುವುದು.

3. ಪ್ರಾಧಿಕಾರದ ಕರ್ತವ್ಯಗಳನ್ನು ಅನುಬಂಧ–2ರಲ್ಲಿ ಕೊಟ್ಟಿದೆ.

ಅನುಬಂಧ – 1

1. ಡಾ. ಸಿದ್ದಯ್ಯ ಪುರಾಣಿಕ
2. ಡಾ. ಹಾ. ಮಾ. ನಾಯಕ
3. ಪ್ರೊ. ಎಸ್. ಎಸ್. ಒಡೆಯರ್
4. ಶ್ರೀ ಬಿ. ಎಂ. ಇದಿನಬ್ಬ
5. ಶ್ರೀ ಶಿವಶರಣಪ್ಪ ವಾಲಿ
6. ಶ್ರೀಮತಿ ಬಿಟಿ.ಲಲಿತಾನಾಯಕ್
7. ಶ್ರೀ ಗೊ. ರು. ಚೆನ್ನಬಸಪ್ಪ, ಅಧ್ಯಕ್ಷರು, ಕನ್ನಡ ಸಾಹಿತ್ಯ ಪರಿಷತ್ತು
8. ಡಾ. ಸಿದ್ದಲಿಂಗಯ್ಯ
9. ಅಧ್ಯಕ್ಷರು, ಕರ್ನಾಟಕ ಸಾಹಿತ್ಯ ಅಕಾಡೆಮಿ
10. ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ
11. ಆಯುಕ್ತರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ
12. ನಿರ್ದೇಶಕರು, ಭಾಷಾಂತರ ಇಲಾಖೆ

ಅನುಬಂಧ – 2

1. ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಾರ್ಯಗಳು:–

ಎ. ಸರ್ಕಾರದ ಆಡಳಿತ ಭಾಷಾ ನೀತಿಯ ಅನುಷ್ಠಾನದ ಬಗ್ಗೆ ಬೇರೆ ಬೇರೆ ಇಲಾಖೆಗಳು, ಸಾರ್ವಜನಿಕ ಉದ್ದಿಮೆಗಳು, ಎಲ್ಲ ಸಂಸ್ಥೆಗಳು ಮತ್ತು ಸ್ಥಳೀಯ ನಿಕಾಯಗಳು ಮತ್ತು ಸರ್ಕಾರದಿಂದ ಅನುದಾನ ಪಡೆಯುತ್ತಿರುವ ಸಂಸ್ಥೆಗಳು ಕೈಗೊಂಡಿರುವ ಕ್ರಮಗಳ ಪರಿಶೀಲನೆ ಮಾಡುವುದು:

ಬಿ. ಸರ್ಕಾರ ಅಂಗೀಕರಿಸಿರುವ ಡಾ. ಸರೋಜಿನಿ ಮಹಿಷಿ ವರದಿಯ ಶಿಫಾರಸುಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಕ್ಕೆ ತರಲು ಅಗತ್ಯವಾದ ಕ್ರಮ ಕೈಗೊಳ್ಳುವುದು:

ಸಿ. ಕನ್ನಡವನ್ನು ಆಡಳಿತ ಭಾಷೆಯನ್ನಾಗಿ ಜಾರಿಗೆ ತರುವಲ್ಲಿ ಇರುವ ಅಡಚಣೆಗಳನ್ನು ಗುರುತಿಸಿ ಅವುಗಳ ನಿವಾರಣೆಗೆ ಸೂಕ್ತ ಕ್ರಮಗಳನ್ನು ಕೈಗೊಳ್ಳುವುದು:

ಡಿ. ಕನ್ನಡ ಪರೀಕ್ಷೆಗಳ (ಸೇವಾ ಪರೀಕ್ಷೆ) ಪದ್ಧತಿಯನ್ನು ಕನ್ನಡ ಜ್ಞಾನವನ್ನು ತಿಳಿಯಲು ನಡೆಸಲಾಗುವ ಪರೀಕ್ಷೆಗಳನ್ನು ಈಗಿರುವ ಅಥವಾ ಮುಂದೆ ರೂಪಿಸಬಹುದಾದ ಸಂಬಂಧಪಟ್ಟ ಪಠ್ಯಕ್ರಮಗಳ ಸಿಹತವಾಗಿ ಕಾಲಕಾಲಕ್ಕೆ ಪರಿಶೀಲಿಸುವುದು ಮತ್ತು ಅಗತ್ಯವೆನಿಸಿದರೆ ಇದನ್ನು ಪರಿಷ್ಕರಿಸಲು; ಮಾರ್ಪಡಿಸಲು ಅಥವಾ ನವೀಕರಿಸಲು ರಾಜ್ಯಸರ್ಕಾರಕ್ಕೆ ಸಲಹೆ ನೀಡುವುದು, ಕನ್ನಡ ಬೆರಳಚ್ಚು ಯಂತ್ರಗಳ ತಯಾರಿಕೆ , ಖರೀದಿ ಮತ್ತು ವಿತರಣೆ ಬಗ್ಗೆ ಕಛೇರಿ ಆಧುನೀಕರಣದಲ್ಲಿ ಬಳಸಲಾಗುವ ಕಂಪ್ಯೂಟರ್, ಟೆಲಿಪ್ರಿಂಟರ್ಸ್, ಟೆಲೆಕ್ಸ್ ಇತ್ಯಾದಿ ಆಧುನಿಕ ಉಪಕರಣಗಳಲ್ಲಿ ಕನ್ನಡವನ್ನು ಬಳಸುವ ಬಗ್ಗೆ ಅಧ್ಯಯನ ಹಾಗೂ ಸಮಾಲೋಚನೆ ನಡೆಸುವುದು ಮತ್ತು ಈ

ಸಂಬಂಧದಲ್ಲಿ ಕನ್ನಡವನ್ನೇ ಸಂಪೂರ್ಣವಾಗಿ ಬಳಸುವುದಕ್ಕೆ ಪ್ರೇರಕವಾಗಬಹುದಾದ ನಿರ್ಣಯಗಳನ್ನು ಕೈಗೊಂಡು ಅದನ್ನು ಕಾರ್ಯಗತಗೊಳಿಸುವುದು;

ಇ. ಅಧಿಕಾರಿಗಳಿಗೆ: ನೌಕರರಿಗೆ ಕನ್ನಡ ಬಳಕೆಗೆ ಅನುಕೂಲವಾದ ತರಬೇತಿ ಕಾರ್ಯಕ್ರಮ, ಶಿಬಿರ, ಪ್ರದರ್ಶನ ಮತ್ತು ವಿಚಾರ ಸಂಕೀರ್ಣಗಳನ್ನು ಏರ್ಪಡಿಸುವುದು ಮತ್ತು ಕನ್ನಡೇತರರಿಗೆ ಕನ್ನಡ ಕಲಿಕೆ ಕಾರ್ಯಕ್ರಮಗಳನ್ನು ಮತ್ತು ಆ ಸಂಬಂಧ ಪಠ್ಯಕ್ರಮ, ಸಾಹಿತ್ಯ ಸಿದ್ಧಪಡಿಸುವುದು:

ಎಫ್ ಕನ್ನಡ ಅಭಿವೃದ್ಧಿಗೆ ಸಂಬಂಧಿಸಿದ ಉಪಯುಕ್ತ ಪ್ರಕಟಣೆಗಳನ್ನು ಪ್ರಕಟಿಸುವುದು, ಖರೀದಿಸುವುದು ಮತ್ತು ವಿತರಿಸುವುದು:

ಜಿ. ಕಛೇರಿಗಳಲ್ಲಿ ಬಳಸಲಾಗುವ ಎಲ್ಲಾ ನಮೂನೆಗಳು ಕನ್ನಡದಲ್ಲಿ ಮುದ್ರಣವಾಗುವಂತೆ ನೋಡಿಕೊಳ್ಳುವುದು ಹಾಗೂ ಕನ್ನಡೇತರ ಭಾಷೆಗಳಲ್ಲಿ ಇರಲೇಬೇಕಾದ ನಮೂನೆ, ಪ್ರಕಟಣೆ ಮತ್ತು ರಿಜಿಸ್ಟರುಗಳನ್ನು ಪರಿಶೀಲಿಸಿ, ಮುದ್ರಣಕ್ಕೆ ಅನುಮತಿ ನೀಡುವುದು:

ಎಚ್ ರಾಜ್ಯದಲ್ಲಿ ಹೆಚ್ಚು ಜನಸಂಪರ್ಕ ಹೊಂದಿರುವ ಕೇಂದ್ರ ಸರ್ಕಾರದ ಕಛೇರಿಗಳು, ಬ್ಯಾಂಕುಗಳು, ಅಂಚೆ ಕಚೇರಿಗಳು ಮತ್ತು ಮತ್ತಿತರ ಕಛೇರಿಗಳು ಉದ್ದಿಮೆಗಳಲ್ಲಿ ದೈನಂದಿನ ಬಳಕೆಯಲ್ಲಿರುವ ನಮೂನೆ, ನೋಟೀಸು, ನಾಮ ಫಲಕಗಳಲ್ಲಿ ಕೇಂದ್ರ ಸರ್ಕಾರದ ಭಾಷಾ ನೀತಿಗೆ ಅನುಗುಣವಾಗಿ ಪ್ರಾದೇಶಿಕ ಭಾಷೆಯನ್ನು ಬಳಸಲಾಗುತ್ತಿದೆಯೇ ಎಂಬುದನ್ನು ಪರಿಶೀಲಿಸುವುದು ಮತ್ತು ಈ ಸಂಬಂಧ ಅಂಥ ಕಚೇರಿಗಳೊಂದಿಗೆ ಪತ್ರ ವ್ಯವಹಾರ ಕೈಗೊಳ್ಳುವುದು.

ಐ. ಆಡಳಿತ ಪೂರಕ ಸಾಹಿತ್ಯ ರಚನೆ, ಪರಿಷ್ಕರಣೆ, ಮುದ್ರಣ ಮತ್ತು ವಿತರಣೆ ವಿಷಯಗಳಲ್ಲಿ ತೀರ್ಮಾನ ಕೈಗೊಳ್ಳುವುದು ಮತ್ತು ಈ ಕ್ಷೇತ್ರದಲ್ಲಿನ ಪ್ರಗತಿಯನ್ನು ಆಗಿಂದಾಗ್ಗೆ ಸಮೀಕ್ಷಿಸಿ ಸೂಕ್ತ ಕ್ರಮ ಸೂಚಿಸುವುದು.

2. ಪ್ರಾಧಿಕಾರದ ಅಧಿಕಾರ ವ್ಯಾಪ್ತಿ:

ಎ. <u>ಮಾಹಿತಿ ಪಡೆದುಕೊಳ್ಳುವುದು</u>:-

ಪ್ರಾಧಿಕಾರದ ಉದ್ದೇಶಗಳಿಗಾಗಿ, ರಾಜ್ಯ ಸರ್ಕಾರದ ಯಾವ ಅಧಿಕಾರಿಯಿಂದಾದರೂ ಮಾಹಿತಿಯನ್ನು ಕೋರುವುದು ಮತ್ತು ಪಡೆದುಕೊಳ್ಳಬಹುದು ಅಂಥ ಅಧಿಕಾರಿಯು ಪ್ರಾಧಿಕಾರವು ಕೋರಬಹುದಾದ ಮಾಹಿತಿಯನ್ನು ತಪ್ಪದೆ ಒದಗಿಸಬೇಕು.

ಬಿ. <u>ಪ್ರಾಧಿಕಾರದ ನಿರ್ದೇಶನಗಳು</u>:-

ಪ್ರಾಧಿಕಾರದ ಉದ್ದೇಶಗಳನ್ನು ನೆರವೇರಿಸುವ ಸಲುವಾಗಿ ತನ್ನ ಯೋಜನೆಯನ್ನು ಮತ್ತು ಕಾರ್ಯಕ್ರಮಗಳನ್ನು ಅನುಷ್ಠಾನಕ್ಕೆ ತರುವ ಬಗ್ಗೆ ಇಲಾಖೆಗಳಿಗೆ ನೀಡಬಹುದಾದ ನಿರ್ದೇಶನಗಳನ್ನು ಇಲಾಖೆಗಳು ಪಾಲಿಸಬೇಕು.

ಸಿ. <u>ಕರ್ತವ್ಯ ಲೋಪವನ್ನು ದಾಖಲಿಸುವ ಮತ್ತು ನಿರ್ದೇಶನಗಳನ್ನು ನೀಡುವ ಅಧಿಕಾರ</u>:-

ಪ್ರಾಧಿಕಾರದ ಉದ್ದೇಶಗಳನ್ನು ನೆರವೇರಿಸುವ ಸಲುವಾಗಿ ಸರ್ಕಾರವು ಕಾಲಕಾಲಕ್ಕೆ ಹೊರಡಿಸುವ ಅಥವಾ ಈಗಾಗಲೇ ಜಾರಿಯಲ್ಲಿರುವ ಯಾವುದೇ ಆದೇಶವನ್ನು ರಾಜ್ಯ ಸರ್ಕಾರ ಮತ್ತು ಸ್ಥಳೀಯ ನಿಕಾಯಗಳ ಅಧಿಕಾರಿಗಳು: ನೌಕರರು ಉಲ್ಲಂಘಿಸಿದರೆ ಅಂಥ ಉಲ್ಲಂಘನೆಯನ್ನು ಕರ್ತವ್ಯಲೋಪವೆಂದು ದಾಖಲಿಸಿ, ಅಂಥ ವ್ಯಕ್ತಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ನೇಮಕಾತಿ ಪ್ರಾಧಿಕಾರಕ್ಕೆ ನಿರ್ದೇಶನಗಳನ್ನು ನೀಡುವುದು ಮತ್ತು ನೇಮಕಾತಿ ಪ್ರಾಧಿಕಾರವು ಕೈಗೊಂಡ ಕ್ರಮವನ್ನು ಪ್ರಾಧಿಕಾರಕ್ಕೆ ತಿಳಿಸಬೇಕು.

ಡಿ. ಅಧಿಕಾರಿಗಳನ್ನು ಹಾಜರಾಗುವಂತೆ ನಿರ್ದೇಶಿಸುವ ಅಧಿಕಾರ:-

ಪ್ರಾಧಿಕಾರದ ಧ್ಯೇಯ ಮತ್ತು ಉದ್ದೇಶಗಳನ್ನು ಸರಿಯಾಗಿ ಮತ್ತು ಪರಿಣಾಮಕಾರಿಯಾಗಿ ಅನುಷ್ಠಾನಗೊಳ್ಳುವಂತೆ ಮಾಡುವ ಸಲುವಾಗಿ ಪ್ರಾಧಿಕಾರವು ರಾಜ್ಯ ಸರ್ಕಾರ, ಸ್ಥಳೀಯ ನಿಕಾಯಗಳ, ಸಾರ್ವಜನಿಕ ಉದ್ದಿಮೆಗಳು ಮತ್ತು ಸರ್ಕಾರದ ಅನುದಾನಗಳನ್ನು ಪಡೆಯುತ್ತಿರುವ ಎಲ್ಲ ಸಂಸ್ಥೆಗಳ ಅಧಿಕಾರಿಗಳು ಅಥವಾ ನೌಕರರನ್ನು ಪ್ರಾಧಿಕಾರದ ಮುಂದೆ ಹಾಜರಾಗುವಂತೆ ನಿರ್ದೇಶಿಸುವ ಅಧಿಕಾರ ನೀಡಲಾಗಿದೆ.

3. ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಶಾಸನಬದ್ಧ ಅಧಿಕಾರವನ್ನು ಕೊಡುವ ಉದ್ದೇಶ ಸರ್ಕಾರಕ್ಕೆ ಇದೆ. ಆ ಬಗ್ಗೆ ಕರಡು ಅಧಿನಿಯಮವನ್ನು ರಚಿಸಲಾಗಿದೆ. ಅಧಿನಿಯಮದ ಪರಿಷ್ಕರಣದ ಹಂತದಲ್ಲಿದೆ.

ಬೇಲೂರು ಪಟ್ಟಣದಲ್ಲಿ ಕ್ರೀಡಾಂಗಣ

563 (1368): ಶ್ರೀ ಬಿ. ಹೆಚ್. ಲಕ್ಷ್ಮಣಯ್ಯ (ಬೇಲೂರು)

ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವಜನ ಸೇವಾ ಮತ್ತು ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ. ಬೇಲೂರು ಪಟ್ಟಣದಲ್ಲಿ ಕ್ರೀಡಾಂಗಣ ನಿರ್ಮಿಸಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ: ?

ಆ. ಈ ಕ್ರೀಡಾಂಗಣಕ್ಕಾಗಿ ಅಂದಾಜು ತಯಾರಿಸಲಾಗಿತ್ತೆ ?

ಇ. ಹಾಗಿದ್ದರೆ ಎಷ್ಟು ಹಣ ನಿಗದಿ ಮಾಡಲಾಗಿತ್ತು ?

ಈ. ಈ ಕ್ರೀಡಾಂಗಣ ಯಾವಾಗ ಪ್ರಾರಂಭ ಮಾಡಲಾಗುವುದು ?

ಶ್ರೀ ಹೆಚ್. ವಿಶ್ವನಾಥ್ (ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವಜನ ಸೇವಾ ಮತ್ತು ಕ್ರೀಡಾ ರಾಜ್ಯ ಸಚಿವರು):–

ಅ. ಇದೆ.

ಆ. ಹೌದು.

ಇ. ಅಂದಾಜು ವೆಚ್ಚ ರೂ. 16.91 ಲಕ್ಷ.

ಈ. ಸದರಿ ಕ್ರೀಡಾಂಗಣ ನಿರ್ಮಾಣ ಪ್ರಸ್ತಾವನೆ ಸರ್ಕಾರದ ತೀವ್ರ ಪರಿಶೀಲನೆಯಲ್ಲಿದ್ದು ಈ ಪ್ರಸ್ತಾವನೆಗೆ ಆಡಳಿತಾತ್ಮಕ ಮಂಜೂರಾತಿ ನೀಡಿದ ತಕ್ಷಣ ನಿರ್ಮಾಣ ಕೆಲಸವನ್ನು ಪ್ರಾರಂಭಿಸಲಾಗುವುದು.

ನೆಲಮಂಗಲ ತಾಲ್ಲೂಕಿಗೆ ಪಡಿತರ ವಸ್ತುಗಳ ವಿತರಣೆ

564 (1346): ಶ್ರೀ ಅಂಜನಮೂರ್ತಿ (ನೆಲಮಂಗಲ)

ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?